ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೊಂದನೆಯ ಅಧಿವೇಶನ

ಮಂಗಳವಾರ, ದಿನಾಂಕ: 29ನೇ ಸೆಪ್ಟಂಬರ್, 2020

ರಾಜ್ಯದಲ್ಲಿ ಬರಗಾಲದಿಂದ ನಾಶವಾಗಿರುವ ತೆಂಗು ಬೆಳೆಯ ಕುರಿತು

ಶ್ರೀ ಆರ್.ಬಿ. ತಿಮ್ಮಾಪೂರ (ವಿಧಾನ ಸಭೆಯಿಂದ ಚುನಾಯಿತರಾದವರು):-

977(1075) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ 2 ವರ್ಷಗಳಲ್ಲಿ ರಾಜ್ಯದಲ್ಲಿ ಬರಗಾಲದಿಂದ ನಾಶವಾಗಿರುವ ತೆಂಗು ಬೆಳೆಯ ಪ್ರಮಾಣವನ್ನು ಅಂದಾಜಿಸಲಾಗಿದೆಯೇ ;

(ಆ) ಅಂದಾಜಿಸಿದ್ದಲ್ಲಿ, ಎಷ್ಟು ಪ್ರಮಾಣದ ಬೆಳೆ ನಷ್ಟ ಆಗಿವೆ ; (ಜಿಲ್ಲಾವಾರು ವಿವರ ಒದಗಿಸುವುದು)

(ಇ) ತೆಂಗು ಬೆಳೆ ನಷ್ಟಕ್ಕೆ ರೈತರಿಗೆ ಪರಿಹಾರ ನೀಡಲು ಸರ್ಕಾರದಿಂದ ಅನುದಾನ ಬಿಡುಗಡೆ ಮಾಡಲಾಗಿದೆಯೇ ; (ಅನುದಾನ ಬಿಡುಗಡೆಯಾಗಿರುವ ಜಿಲ್ಲಾವಾರು ವಿವರ ಒದಗಿಸುವುದು )

(ಈ) ಈ ಪರಿಹಾರದ ಹಣವನ್ನು ರೈತರ ಖಾತೆಗೆ ಜಮೆ ಮಾಡಲಾಗಿದೆಯೇ ; ಯಾವ ಯಾವ ಜಿಲ್ಲೆಗಳಲ್ಲಿ ಎಷ್ಟು ಜನ ರೈತರಿಗೆ ಜಮೆ ಮಾಡಲಾಗಿದೆ ; ಬಾಕಿ ಇರುವ ಪ್ರಕರಣಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಉ) ಹಾನಿಗೀಡಾದ ಪ್ರತಿ ತೆಂಗಿನ ಮರಕ್ಕೆ ಎಷ್ಟು ಪರಿಹಾರ ಒದಗಿಸಲಾಗುತ್ತಿದೆ ? (ವಿವರ ಒದಗಿಸುವುದು)